# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು - 572 103

ಸಂಖ್ಯೆ: ತುವಿ:ಶೈವಿ:2025-26/9546 ದಿನಾಂಕ: 18.11.2025

## ಸುತ್ತೋಲೆ

**ವಿಷಯ** : ಮಕ್ಕಳ ಸಹಾಯವಾಣಿ ಸಂಖ್ಯೆ : 1098ನ್ನು ಕಡ್ಡಾಯವಾಗಿ ಶಾಶ್ವತ ಫಲಕದಲ್ಲಿ ಪ್ರಕಟಿಸುವ ಬಗ್ಗೆ.

**ಉಲ್ಲೇಖ** : ಸಂಖ್ಯೆ: ಇಡಿ 239 ವಿವಿಧ 2025, ಬೆಂಗಳೂರು ದಿನಾಂಕ: 06.11.2025.

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಡಾ. ತಿಪ್ಪೇಸ್ವಾಮಿ ಕೆ.ಟಿ. ಸದಸ್ಯರು, ಕರ್ನಾಟಕ ರಾಜ್ಯ ಶಿಕ್ಷಣ ಆಯೋಗ, ಬೆಂಗಳೂರು ಇವರು ಸರ್ಕಾರಕ್ಕೆ ಮನವಿ ಪತ್ರದಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆ ಮಾಡುವುದು ಸಂಕಷ್ಟದಲ್ಲಿನ ಹಾಗೂ ಸವಾಲಿನಲ್ಲಿರುವ ಮಕ್ಕಳ ಹಿತರಕ್ಷಣೆಗೆ ಹೆಚ್ಚು ಒತ್ತು ನೀಡಿ ಅಂತಹ ಮಕ್ಕಳ ಗುರುತಿಸುವಿಕೆ ಹಾಗೂ ಪುನರ್ವಸತಿ ಸೇವೆ ಒದಗಿಸುವಲ್ಲಿ **ಮಕ್ಕಳ ಸಹಾಯವಾಣಿ ಸಂಖ್ಯೆ 1098** ಮಹತ್ವದ್ದಾಗಿದ್ದು, ಬಾಲ್ಯ ವಿವಾಹ, ಬಾಲ ಕಾರ್ಮಿಕತೆ, ಸಂಕಷ್ಟದಲ್ಲಿನ ಮಕ್ಕಳ ರಕ್ಷಣೆ ಸೇರಿದಂತೆ ವಿವಿಧ ರೀತಿಯ ಮಕ್ಕಳ ಸಮಸ್ಯೆಗಳಿಗೆ ಸ್ಪಂದಿಸಲು ಸಾಧ್ಯವಾಗುವುದು ಎಂದು ತಿಳಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಉಲ್ಲೇಖಿತ ಪತ್ರದಲ್ಲಿ ತಿಳಿಸಿರುವಂತೆ, ರಾಜ್ಯದಲ್ಲಿನ ಸಂಕಷ್ಟದಲ್ಲಿರುವ ಹಾಗೂ ವಿವಿಧ ರೀತಿಯ ಸವಾಲಿನಲ್ಲಿರುವ ಮಕ್ಕಳ ಹಿತರಕ್ಷಣೆಗೆ ಹೆಚ್ಚು ಒತ್ತು ನೀಡುವ ನಿಟ್ಟಿನಲ್ಲಿ **ಮಕ್ಕಳ ಸಹಾಯವಾಣಿ** ಸಂಖ್ಯೆ 1098ನ್ನು ಕಡ್ಡಾಯವಾಗಿ ವಿಶ್ವವಿದ್ಯಾನಿಲಯದ ಎಲ್ಲಾ ಸ್ನಾತಕೋತ್ತರ ವಿಭಾಗಗಳು, ಘಟಕ ಮತ್ತು ಸಂಯೋಜಿತ ಕಾಲೇಜುಗಳಲ್ಲಿ ಶಾಶ್ವತ ಫಲಕದಲ್ಲಿ ಕಡ್ಡಾಯವಾಗಿ ಪ್ರಕಟಿಸುವಂತೆ ಈ ಮೂಲಕ ತಿಳಿಸಲಾಗಿದೆ.

ಉಪಕುಲಸಚಿವರು

ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

1. ಅಧ್ಯಕ್ಷರು/ಸಂಯೋಜಕರು ಸ್ನಾತಕೋತ್ತರ ಅಧ್ಯಯನ ಕೇಂದ್ರ ಮತ್ತು ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು.
3. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸಂಯೋಜಿತ ಕಾಲೇಜುಗಳು (ಸ್ನಾತಕ ಮತ್ತು ಸ್ನಾತಕೋತ್ತರ) ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

**ಪ್ರತಿಗಳು:**

1. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.-ಇ-ಮೇಲ್ ಮೂಲಕ ಕಳುಹಿಸುವುದು.
2. ಕಛೇರಿ ಪ್ರತಿ.

# ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 239 ವಿವಿಧ 2025

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ, 06ನೇ ಮಹಡಿ,
ಬೆಂಗಳೂರು, ದಿನಾಂಕ: 06.11.2025

**ಇವರಿಂದ:**

ಸರ್ಕಾರದ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು-560001.

**"ಅತ್ಯಂತ ಜರೂರು"**

**ಇವರಿಗೆ:**

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-01.
2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಸಂಪಿಗೆ ರಸ್ತೆ, 18ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560012.
3. ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಗಾಂಧಿನಗರ, ಬೆಂಗಳೂರು-560009.
4. ಉಪ ಮಹಾನಿರ್ದೇಶಕರು (ಕರ್ನಾಟಕ & ಗೋವಾ), ಎನ್‌ಸಿಸಿ ನಿರ್ದೇಶನಾಲಯ, ನಂ: 08, ಕನ್ನಿಂಗ್‌ಹ್ಯಾಮ್ ರಸ್ತೆ, ಬೆಂಗಳೂರು-560052.
5. ಆಡಳಿತಾಧಿಕಾರಿಗಳು, ಎನ್‌ಸಿಸಿ ನಿರ್ದೇಶನಾಲಯ (ರಾಜ್ಯಕೋಶ), ನಂ: 08, ಕನ್ನಿಂಗ್‌ಹ್ಯಾಮ್ ರಸ್ತೆ, ಬೆಂಗಳೂರು-560052.
6. ರಾಜ್ಯದ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳ ಕುಲಪತಿಗಳು/ ಕುಲಸಚಿವರುಗಳು/

ಮಾನ್ಯರೇ,

**ವಿಷಯ:** ರಾಜ್ಯದ ಎಲ್ಲಾ ಸರ್ಕಾರಿ ಸಂಸ್ಥೆ/ಅಧೀನ ಕ್ಷೇತ್ರ ಇಲಾಖೆಗಳಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆ: 1098 ಅನ್ನು ಕಡ್ಡಾಯವಾಗಿ ಶಾಶ್ವತ ಫಲಕದಲ್ಲಿ ಪ್ರಕಟಿಸುವ ಬಗ್ಗೆ.

**ಉಲ್ಲೇಖ:** ಡಾ|| ತಿಪ್ಪೇಸ್ವಾಮಿ ಕೆ.ಟಿ., ಸದಸ್ಯರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರು ಇವರು ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಬರೆದಿರುವ ಪತ್ರ, ದಿನಾಂಕ: 26.08.2025.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಡಾ|| ತಿಪ್ಪೇಸ್ವಾಮಿ ಕೆ.ಟಿ., ಸದಸ್ಯರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರು ಇವರು ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಬರೆದಿರುವ ಪತ್ರ ಹಾಗೂ ಅಡಕಗಳ ಪ್ರತಿಯನ್ನು ಈ ಪತ್ರದೊಂದಿಗೆ ಲಗತ್ತಿಸಿದೆ. ಸದರಿ ಪತ್ರದಲ್ಲಿನ ವಿಷಯವು ಸ್ವಯಂವೇದ್ಯವಾಗಿದ್ದು, ರಾಜ್ಯದಲ್ಲಿನ ಸಂಕಷ್ಟದಲ್ಲಿರುವ ಹಾಗೂ ವಿವಿಧ ರೀತಿಯ ಸವಾಲಿನಲ್ಲಿರುವ ಮಕ್ಕಳ ಹಿತರಕ್ಷಣೆಗೆ ಹೆಚ್ಚು ಒತ್ತು ನೀಡಬೇಕಿರುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಕೂಡಲೇ ಅಗತ್ಯ ಕ್ರಮವಹಿಸಿ, ತಮ್ಮ ಇಲಾಖೆ/ಕಚೇರಿ/ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಶಿಕ್ಷಣ ಸಂಸ್ಥೆಗಳು/ಪರಿಷತ್ತು/ಪ್ರಾಧಿಕಾರ/ವಿಶ್ವವಿದ್ಯಾಲಯಗಳ ಪ್ರಕಟಣಾ ಫಲಕಗಳಲ್ಲಿ **ಮಕ್ಕಳ ಸಹಾಯವಾಣಿ ಸಂಖ್ಯೆ: 1098** ಅನ್ನು ಶಾಶ್ವತವಾಗಿ ಪ್ರಕಟಿಸಿ ಸಂಕಷ್ಟದಲ್ಲಿರುವ

...2.

ಮಕ್ಕಳ ನೆರವಿಗೆ ಸ್ಪಂದಿಸಲು ಅಗತ್ಯ ಕ್ರಮವಹಿಸುವಂತೆ ಈ ಮೂಲಕ ತಮ್ಮನ್ನು ಕೋರಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

06.11.25

(ಸಂಜಯ್.ಬಿ.ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ
(ಕಾಲೇಜು ಶಿಕ್ಷಣ & ಸಾಮಾನ್ಯ).

**ಪ್ರತಿ: ಮಾಹಿತಿಗಾಗಿ:**

ಸರ್ಕಾರದ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, 06ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

ಕರ್ನಾಟಕ ಸರ್ಕಾರ
ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ
4ನೇ ಮಹಡಿ, ಕೃಷಿ ಭವನ, ನೃಪತುಂಗ ರಸ್ತೆ, ರಾಣಿ ಚೆನ್ನಮ್ಮ ವೃತ್ತ, ಬೆಂಗಳೂರು- 560 001
ದೂರವಾಣಿ ಸಂಖ್ಯೆ: 080-22115290 E-mail: kscpcr@gmail.com

**ಡಾ. ತಿಪ್ಪೇಸ್ವಾಮಿ ಕೆ.ಟಿ.** ಸದಸ್ಯರು E-mail: thippeswamykscpcr@gmail.com

ದಿನಾಂಕ: 26-08-2025

ಇವರಿಗೆ

ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು
ಕರ್ನಾಟಕ ಸರ್ಕಾರ.

ಮಾನ್ಯರೇ,

ವಿಷಯ: ರಾಜ್ಯದ ಎಲ್ಲಾ ಸರ್ಕಾರಿ/ ಅರೆ ಸರಕಾರಿ/ ಸೇವಾ ಸಂಸ್ಥೆಗಳ ಕಟ್ಟಡಗಳ ಮೇಲೂ ಮಕ್ಕಳ ಸಹಾಯವಾಣಿ 1098 ಅನ್ನು ಕಡ್ಡಾಯವಾಗಿ ಬರೆಸಲು ಸೂಕ್ತ ನಿರ್ದೇಶನ ನೀಡುವ ಬಗ್ಗೆ.

ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಮಕ್ಕಳ ಹಕ್ಕುಗಳ ರಕ್ಷಣೆ ಇಂದಿನ ತುರ್ತು ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಅನುಷ್ಠಾನಗೊಂಡಿರುವ ಮಿಷನ್ ವಾತ್ಸಲ್ಯ ಯೋಜನೆಯೂ ಮಕ್ಕಳ ಅಭಿವೃದ್ಧಿ ಹಾಗೂ ರಕ್ಷಣೆಯ ಆದ್ಯತೆಯನ್ನು ಸಾಧಿಸುವ ಒಂದು ಮಾರ್ಗವಾಗಿದ್ದು, ಸಂಕಷ್ಟದಲ್ಲಿನ ಹಾಗೂ ಸವಾಲಿನಲ್ಲಿರುವ ಮಕ್ಕಳ ಹಿತರಕ್ಷಣೆಗೆ ಹೆಚ್ಚು ಒತ್ತು ನೀಡುತ್ತಿದೆ. ಇಂತಹ ಮಕ್ಕಳ ಗುರುತಿಸುವಿಕೆ, ಸಂಕಷ್ಟ ಸ್ಥಿತಿಯಲ್ಲಿ ಮಾಹಿತಿ ಹಂಚಿಕೆ ಹಾಗೂ ಪುನರ್ವಸತಿ ಸೇವೆ ಒದಗಿಸುವಲ್ಲಿ ಮಕ್ಕಳ ಸಹಾಯವಾಣಿ 1098 ಮಹತ್ವದ ಪಾತ್ರವಹಿಸುತ್ತದೆ. ಈ ಸಂಖ್ಯೆಯನ್ನು ವ್ಯಾಪಕವಾಗಿ ಪ್ರಚಾರಮಾಡಿದಲ್ಲಿ ಬಾಲ್ಯವಿವಾಹ, ಬಾಲ ಕಾರ್ಮಿಕತೆ, ಸಂಕಷ್ಟದಲ್ಲಿನ ಮಕ್ಕಳ ರಕ್ಷಣೆ ಸೇರಿದಂತೆ ವಿವಿಧ ರೀತಿಯ ಮಕ್ಕಳ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಲು ಸಾಧ್ಯವಾಗಲಿದೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರದ ಎಲ್ಲಾ ಸರ್ಕಾರಿ, ಅರೆ ಸರಕಾರಿ, ಶೈಕ್ಷಣಿಕ ಸಂಸ್ಥೆಗಳು, ಖಾಸಗಿ ಸೇವಾ ಸಂಸ್ಥೆಗಳು ಸೇರಿದಂತೆ ಎಲ್ಲಾ ಕಟ್ಟಡಗಳ ಮೇಲೂ ಮಕ್ಕಳ ಸಹಾಯವಾಣಿ ಸಂಖ್ಯೆಯನ್ನು ಕಡ್ಡಾಯವಾಗಿ ಶಾಶ್ವತ ಫಲಕದಲ್ಲಿ ಪ್ರದರ್ಶಿಸಲು ತಾವು ಸೂಕ್ತ ನಿರ್ದೇಶನ ನೀಡಬೇಕೆಂದು ಕೋರುತ್ತೇನೆ. (ಈಗಾಗಾಲೇ ಕೆಲವು ಇಲಾಖೆಗಳು ಕ್ರಮವಹಿಸಿವೆ. ಇನ್ನೂ ಕೆಲವು ಕಡೆ ನಮ್ಮ ಇಲಾಖೆಯಲ್ಲಿ ಈ ಬಗ್ಗೆ ಯಾವುದೇ ನಿರ್ದೇಶನವಿಲ್ಲಾ ಎಂಬ ಗೊಂದಲಗಳಿವೆ) ತಮ್ಮ ಈ ನಿರ್ದೇಶನ ಇಡೀ ದೇಶದಲ್ಲಿಯೇ ಒಂದು ಮಾದರಿ ಕ್ರಮವಾಗಲಿದ್ದು ಮಕ್ಕಳ ರಕ್ಷಣೆಗೆ ವೇಗ ತರಲಿದೆ. ಈ ಸಂಬಂಧ ಎಲ್ಲಾ ಇಲಾಖೆಗಳಿಗೂ ಸೂಕ್ತ ನಿರ್ದೇಶನ ನೀಡಬೇಕೆಂದು ತಮ್ಮನ್ನು ವಿನಂತಿಸುತ್ತೇನೆ.

(ಈ ಪತ್ರದೊಂದಿಗೆ ಕೇಂದ್ರ ಸರ್ಕಾರದಿಂದ ಅನುಮೋದಿತವಾದ ಮಕ್ಕಳ ಸಹಾಯವಾಣಿ ಲೋಗೋ ಅನ್ನು ತಮ್ಮ ಅವಗಾಹನೆಗಾಗಿ ಲಗತ್ತಿಸಲಾಗಿದೆ.)

DIPR
(UD/RDPR)
All HoDs

ವಂದನೆಗಳೊಂದಿಗೆ

ತಮ್ಮ ವಿಶ್ವಾಸಿ

(ಡಾ. ತಿಪ್ಪೇಸ್ವಾಮಿ ಕೆ.ಟಿ.)

ಪ್ರತಿಯನ್ನು:

1. ಮಾನ್ಯ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು, ಕರಾಮಹರಆ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.



File No. ED/239/VVD/2025-ED_SO_GEN2-EDUCATION HIGHER SEC (Computer No. 1942893)
Generated from eOffice by CHETHAN R, ED-GEN2-ASST(CR), ASSISTANT, EDUCATION HIGHER DEPARTMENT on 06/11/2025 03:37 PM

# 1098
## CHILD HELPLINE
24X7